# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : M/s JSW Renew Energy Limited ಕಂಪನಿಯವರಿಗೆ ದಾವಣಗೆರೆ ಜಿಲ್ಲೆ, ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 20.4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ: 1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ:KREDL/08/JSWREL-20.4 MW/ Jagalur/Davanagere/F-34(2021)/2828, ದಿನಾಂಕ:04.10.2021.

2) ದಿನಾಂಕ:02.02.2022ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿ.

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದನ್ವಯ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s JSW Renew Energy Limited ರವರಿಗೆ ದಾವಣಗೆರೆ ಜಿಲ್ಲೆಯ, ಜಗಳೂರು ತಾಲ್ಲೂಕಿನ ಮಡಗಿನಕೆರೆ, ವ್ಯಾಸಗೊಂಡನಹಳ್ಳಿ, ಕೊರಟಿಕೆರೆ, ಕಸ್ತೂರಿಪುರ, ಲಂಬಾಣಿಹಟ್ಟಿ, ಬಿಸ್ತುವಳ್ಳಿ, ಸೋಮನಹಳ್ಳಿ, ಸಂತೆಮುದ್ದಾಪುರ, ಗುಟ್ಟೆದುರ್ಗ, ಬುಲ್ಲನಹಳ್ಳಿ, ರಸ್ತೆ ಮಕುಂಟೆ, ಗೋಪಗೊಂಡನಹಳ್ಳಿ, ಅರಸಿನಗುಂಡಿ, ತೋರಣಗಟ್ಟೆ, ಗೊಲ್ಲರಹಟ್ಟಿ, ನಿಬ್ಲೂರ್, ಬಿದರ್ ಕೆರೆ, ಕಟ್ಟಿಗೆಹಳ್ಳಿ, ಲಿಂಗಣ್ಣನಹಳ್ಳಿ ಮತ್ತು ನಿಬ್ಲೂರ್ ಗೊಲ್ಲರಹಟ್ಟಿ ಗ್ರಾಮಗಳಲ್ಲಿ 20.4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಪಡೆಯುವ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕ್ರೆಡಲ್‌ಗೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಕೇಂದ್ರ ಸರ್ಕಾರದ Power Grid Corporation of India Limited (PGCIL) ನ ವಿದ್ಯುತ್ ಪ್ರಸರಣ ಜಾಲಕ್ಕೆ ಜೋಡಿಸಿ, ಹೊರ ರಾಜ್ಯಗಳಿಗೆ SECI ಬಿಡ್ಡಿಂಗ್ / ಮೂರನೇ ವ್ಯಕ್ತಿಗೆ Inter State Transmission System (ISTS) ಮುಖಾಂತರ ವಿದ್ಯುತ್ ಸರಬರಾಜು ಮಾಡುವ ವರ್ಗದಡಿ ಪ್ರತಿ ವಿಂಡ್ ಟರ್ಬೈನ್ ಗೆ 4 ಎಕರೆಯಂತೆ Footprint basis ಲೆಕ್ಕೀಕರಿಸಿ, ಜಮೀನುಗಳನ್ನು ಉಪಯೋಗಿಸುವುದು ಮತ್ತು ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಮಾರ್ಗಸೂಚಿಯಂತೆ, ಅಳವಡಿಸುವ ಷರತ್ತುಗಳನ್ನು ವಿಧಿಸಿ, ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

ಮುಂದುವರೆದು, M/s JSW Renew Energy Limited ರವರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸದರಿಯವರು ಕೋರಿರುವ ಸ್ಥಳವು ಹಂಚಿಕೆಗೆ ಲಭ್ಯವಿರುತ್ತದೆ. ಸದರಿಯವರು 20.4 ಮೆ.ವ್ಯಾ. ಸಾಮರ್ಥ್ಯದ ಯೋಜನೆಗೆ ಕಡಿಮೆ ಸಾಮರ್ಥ್ಯದ (500 ಕಿ.ವ್ಯಾ) ವಿಂಡ್ ಟರ್ಬೈನ್‌ಗಳನ್ನು ಅಳವಡಿಸುತ್ತಿರುವುದಾಗಿ ತಿಳಿಸಿದ ಹಿನ್ನಲೆಯಲ್ಲಿ, ಪ್ರಸ್ತುತ MNRE ರವರ RLMM ಪಟ್ಟಿಯಲ್ಲಿ ಹೆಚ್ಚಿನ ಸಾಮರ್ಥ್ಯದ ವಿಂಡ್ ಟರ್ಬೈನ್‌ಗಳು ಲಭ್ಯವಿರುವುದರಿಂದ, ಹೆಚ್ಚಿನ ಸಾಮರ್ಥ್ಯದ ವಿಂಡ್ ಟರ್ಬೈನ್‌ಗಳನ್ನು ಸೇರಿಸಿ ನವೀಕರಿಸಿದ ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸುವಂತೆ ಅಭಿವೃದ್ಧಿದಾರರಿಗೆ ತಿಳಿಸಲಾಗಿತ್ತು. ಆದರೆ ಸದರಿಯವರು MNRE ರವರ RLMM ಪಟ್ಟಿಯಲ್ಲಿ 1000 ಕಿ.ವ್ಯಾ. ಸಾಮರ್ಥ್ಯದ ವಿಂಡ್ ಟರ್ಬೈನ್‌ಗಳು ಮಾನ್ಯವಿರುವ ಕಾರಣ, 500 ಕಿ.ವ್ಯಾ. ಸಾಮರ್ಥ್ಯದ ಬದಲಾಗಿ 1000 ಕಿ.ವ್ಯಾ. ಸಾಮರ್ಥ್ಯದ ವಿಂಡ್ ಟರ್ಬೈನ್‌ಗಳನ್ನು ಅಳವಡಿಸುವುದಾಗಿ ತಿಳಿಸಿ ನವೀಕರಿಸಿದ ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಿ ಹಂಚಿಕೆ ನೀಡುವಂತೆ ಕೋರಿರುವುದಾಗಿ ಕೆ.ಆರ್.ಇ.ಡಿ.ಎಲ್. ರವರು ತಿಳಿಸಿರುತ್ತಾರೆ.

M/s JSW Renew Energy Limited ಕಂಪನಿಯು ದಿನಾಂಕ:05.03.2020ರಂದು ನೋಂದಾವಣೆಗೊಂಡಿದ್ದು, ಇದರ ನೋಂದಾಯಿತ ಕಚೇರಿಯು ಮಹಾರಾಷ್ಟ್ರದ ಮುಂಬೈನಲ್ಲಿ ಸ್ಥಾಪಿತಗೊಂಡಿರುತ್ತದೆ. ಸದರಿ ಕಂಪನಿಯು M/s JSW Energy Limited ರವರ SPV ಸಂಸ್ಥೆಯಾಗಿರುತ್ತದೆ. M/s JSW Energy Limited ರವರ ನೆಟ್‌ವರ್ತ್ ದಿನಾಂಕ:31.03.2021ರ ಅಂತ್ಯಕ್ಕೆ ರೂ.11,632.34 ಕೋಟಿಗಳಾಗಿರುತ್ತದೆ ಎಂದು ಚಾರ್ಟೆಡ್ ಅಕೌಂಟೆಂಟ್ ರವರು ದೃಢೀಕರಣ ಪತ್ರವನ್ನು ನೀಡಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಹಂಚಿಕೆ ಸಮಿತಿ ಸಭೆಯಲ್ಲಿ M/s JSW Renew Energy Limited ರವರು ದಾವಣಗೆರೆ ಜಿಲ್ಲೆಯ, ಜಗಳೂರು ತಾಲ್ಲೂಕಿನ ಮಡಗಿನಕೆರೆ, ವ್ಯಾಸಗೊಂಡನಹಳ್ಳಿ, ಕೊರಟಿಕೆರೆ, ಕಸ್ತೂರಿಪುರ, ಲಂಬಾಣಿಹಟ್ಟಿ, ಬಿಸ್ತುವಳ್ಳಿ, ಸೋಮನಹಳ್ಳಿ, ಸಂತೆಮುದ್ದಾಪುರ, ಗುಟ್ಟೆದುರ್ಗ,,

.....2